162(389) ಶ್ರೀ ಹಾಲಪ್ಪ ಹೆಚ್ (ಹೊಸನಗರ)

ಮಾನ್ಯ ಪಶುಸಂಗೋಪನಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಹೊಸನಗರ ತಾಲ್ಲೂಕು ಪಶು ಆಸ್ಪತ್ರೆಯಲ್ಲಿರುವ ವಾಹನವು ರಿಪೇರಿ ಮಾಡಲಾಗದ ಸ್ಥಿತಿಯಲ್ಲಿರುವುದು ಹಾಗೂ ಆಸ್ಪತ್ರೆಯಲ್ಲಿ ವಾಹನವಿಲ್ಲದಿರು ವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದಲ್ಲಿ ಹೊಸನಗರ ಪಶು ಆಸ್ಪತ್ರೆಗೆ ವಾಹನವನ್ನು ಒದಗಿಸಲು ಕೈಗೊಳ್ಳಲಾದ ಕ್ರಮವೇನು?

ಶ್ರೀ ರೇವೂ ನಾಯಕ್ ಬೆಳಮಗಿ

ಅ) ಹೊಸನಗರ ಪಶು ಆಸ್ಪತ್ರೆಯಲ್ಲಿರುವ ಸಂಚಾರಿ ಪಶು ಚಿಕಿತ್ಸಾಲಯದ ವಾಹನವು ದುರಸ್ತಿಯಾಗಿದ್ದು ಸುಸ್ಥಿಯಲ್ಲಿರುತ್ತದೆ

ಆ) ವಾಹನವು ದುರಸ್ಥಿಯಾಗಿ ಸುಸ್ಥಿತಿಯಲ್ಲಿರುವುದರಿಂದ ಹೊಸ ವಾಹನ ಒದಗಿಸುವ ಅವಶ್ಯಕತೆ ಇರುವುದಿಲ್ಲ

163(390) ಶ್ರೀ ಹಾಲಪ್ಪ ಹೆಚ್ (ಹೊಸನಗರ)

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಶಿವಮೊಗ್ಗ ಜಿಲ್ಲೆಯ ಆರೋಗ್ಯ ಕೇಂದ್ರಗಳಳಲ್ಲಿರುವ ಹಿರಿಯ ಮತ್ತು ಕಿರಿಯ ಆರೋಗ್ಯ ಸಹಾಯಕಿಯರ ಹುದ್ದೆಗಳು ಎಷ್ಟು?

ಆ) ಕರ್ತವ್ಯ ನಿರ್ವಹಿಸುತ್ತಿರುವವರ ಸಂಕ್ಯೆ ಎಷ್ಟು?

ಇ) ಖಾಲಿ ಇರುವ ಹುದ್ದರಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?

ಉ) ಯಾವಾಗ ಭರ್ತಿ ಮಾಡಲಾಗುವುದು?

ಊ) ಹೊಸನಗರ ಸಾರ್ವಜನಿಕ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಋ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು?

ಎ) ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಕೈಗೊಂಡ ಕ್ರಮಗಳೇನು?

ಶ್ರೀ ಆರ್ ಅಶೋಕ್

ಅ) ಶಿವಮೊಗ್ಗ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ 66 ಹಿರಿಯ ಆರೋಗ್ಯ ಸಹಾಯಕಿಯರು ಮತ್ತು 342 ಕಿರಿಯ ಆರೋಗ್ಯ ಸಹಾಯಕಿಯರ ಹುದ್ದೆಗಳು ಇರುತ್ತವೆ

ಆ) ಶಿವಮೊಗ್ಗ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ 62 ಹಿರಿಯ ಆರೋಗ್ಯ ಸಹಾಯಕಿಯರು ಮತ್ತು 319 ಕಿರಿಯ ಆರೋಗ್ಯ ಸಹಾಯಕಿಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಇ) 4 ಹಿರಿಯ ಆರೋಗ್ಯ ಸಹಾಯಕಿಯರ ಮತ್ತು 23 ಕಿರಿಯ ಆರೋಗ್ಯ ಸಹಾಯಕಿಯರ ಹುದ್ದೆಗಳು ಖಾಲಿ ಇರುತ್ತವೆ

ಈ) ಖಾಲಿ ಇರುವ ಹಿರಿಯ ಆರೋಗ್ಯ ಸಹಾಯಕಿಯರ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ರಾಜ್ಯದಲ್ಲಿ ತರಬೇತಿ ಹೊಂದಿದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿ ಯರು ಇಲ್ಲದ ಕಾರಣ ತರಬೇತಿ ಪಡೆದು ಉತ್ತೀರ್ಣರಾಗಿ ಬಂದ ನಂತರ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು

ಉ) ರಾಜ್ಯದಲ್ಲಿ 23 ಆರೋಗ್ಯ ಸಹಾಯಕಿಯರ ತರಬೇತಿ ಶಾಲೆ ಇದ್ದು ಇದರಲ್ಲಿ ಪ್ರತಿ ವರ್ಷ 720 ಅಭ್ಯರ್ಥಿಗಳು 18 ತಿಂಗಳ ತರಬೇತಿಯನ್ನು ಪಡೆಯುತ್ತಾರೆ ಸದ್ಯಕ್ಕೆ ತರಬೇತಿ ಪಡೆದ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರಯ ಯಾರೂ ಇರುವುದಿಲ್ಲ ತರರಬೇತಿ ಪಡೆದು ಉತ್ತೀರ್ಣರಾಗಿ ಬಂದಂಥವರಿಗೆ ನೇಮಕಾತಿ ಮಾಡಲು ಕ್ರಮ ಕೈ ಗೊಳ್ಳಲಾಗುವುದು

ಊ) ಬಂದಿದೆ

ಋ) ಹೊಸನಗರ ಸಾರ್ವಜನಿಕ ಆಸ್ಪತ್ರೆಯಲ್ಲಿ 13 ಹುದ್ದೆಗಳು ಮಂಜೂ ರಾಗಿದ್ದು 4 ತಜ್ಞ ವೈದ್ಯಾದಿಕಾರಿಗಳು ಹಾಗೂ ಹೊಸದಾಗಿ ಮಂಜೂರಾದ 5 ತಜ್ಞ ವೈದ್ಯಾದಿಕಾರಿಗಳು ಸೇರಿದಂತೆ ಒಟ್ಟು 09 ಹುದ್ದೆಗಳು ಖಾಲಿ ಇವೆ

ಎ) ಇಲಾಖೆಯಲ್ಲಿ ತಜ್ಞರ ಕೊರತೆ ಇರುವುದರಿಂದ ಖಾಲಿ ಇರುವ ತಜ್ಞ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ಮತ್ತು ಖಾಸಗಿ ತಜ್ಞರನ್ನು ನೇಮಿಸಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಹಾಗೂ ವರ್ಗಾವಣೆ ಸಂದರ್ಭದಲ್ಲಿ ಮತ್ತು ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವವರನ್ನು ಆದ್ಯತೆ ಮೇಲೆ ನೇಮಿಸಲು ಕ್ರಮ ಕೈಗೊಳ್ಳಲಾಗುವುದು ಅಲ್ಲದೇ ನೇಮಕಾತಿ ಸಮಿತಿ ಮೂಲಕ ಆಯ್ಕೆಯಾಗಿರುವ ಸಾಮಾನ್ಯ ಕರ್ತವ್ಯ ವೈದ್ಯಾದಿಕಾರಿಗಳ ಪೈಕಿ ಕೆಲವರು ತಜ್ಞರಿದ್ದು ನೇಮಕಾತಿ ನೀಡುವ ಸಂದರ್ಭದಲ್ಲಿ ಇವರನ್ನು ಸಹ ನೇಮಿಸಲಾಗುವುದು ಹೊಸದಾಗಿ

ಮಂಜೂರಾದ 5 ತಜ್ಞ ಹುದ್ದೆಗಳನ್ನು 100 ಹಾಸಿಗೆಗಳ ಆಸ್ಪತ್ರೆಯ ಕಟ್ಟಡ ಕಾಮಗಾರಿಯೂ ಶೇಕಡ 60 ರಷ್ಟು ಮುಗಿದ ನಂತರ ಭರ್ತಿ ಮಡಲು ಕ್ರಮ ಕೈಗೊಳ್ಳಲಾಗುವುದು

165(137) ಶ್ರೀ ಐವಾನ್ ನಿಗ್ಲಿ (ನಾಮಾಂಕಿತ)

ವಿಷಯ ಕೇಂದ್ರ ಸರ್ಕಾರದ ಅನಿದಾನದ ಕುರಿತು

ಮಾನ್ಯ ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಅಲ್ಪ ಸಂಖ್ಯಾತರ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದಿಂದ ಸ್ವೀಕರಿಸಿದ ಮೊತ್ತವೆಷ್ಟು?

ಆ) 2006–07 ರಲ್ಲಿ ಖರ್ಚುಮಾಡಿದ ಹಣವೆಷ್ಟು?

ಇ) ಲಭ್ಯವಿರುವ ಮೊತ್ತವೆಷ್ಟು?

ಶ್ರೀ ಇಕ್ಬಾಲ್ ಅನ್ಸಾರಿ

ಅ) ಕೇಂದ್ರ ಸರ್ಕಾರದಿಂದ ಪ್ರಾಯೋಜಿತವಾದ ಯೋಜನೆಗಳು ಯಾವುದು ಇರುವುದಿಲ್ಲ

ಆ) ಉದ್ಭವಿಸುವುದಿಲ್ಲ